## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ವೈದ್ಯಕೀಯ ಭತ್ಯೆ ದರಗಳ ಪರಿಷ್ಕರಣೆ.

ಓದಲಾಗಿದೆ:

1. ದಿನಾಂಕ 28.12.1996ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 5 ಎಸ್‌ಆರ್‌ಪಿ 96.
2. ದಿನಾಂಕ 11.01.2019ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 24 ಎಸ್‌ಆರ್‌ಪಿ 2018(VI)
3. ದಿನಾಂಕ 22.07.2024ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 21 ಎಸ್‌ಆರ್‌ಪಿ 2024
4. ದಿನಾಂಕ 23.08.2024ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 21 ಎಸ್‌ಆರ್‌ಪಿ 2024
5. ದಿನಾಂಕ 17.08.2021ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020.
6. ದಿನಾಂಕ 05.09.2022ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020
7. ದಿನಾಂಕ 09.03.2023ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020 (ಭಾ-5)

ಪ್ರಸ್ತಾವನೆ:

ರಾಜ್ಯ ಸರ್ಕಾರದ ನೀತಿ ನಿರ್ಣಯದಂತೆ ಮೇಲೆ (6)ರಲ್ಲಿ ಓದಲಾದ 05-09-2022ರ ಸರ್ಕಾರಿ ಆದೇಶದಲ್ಲಿ ನಗದುರಹಿತ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು (ಕೆ.ಎ.ಎಸ್.ಎಸ್) ಅನುಷ್ಠಾನಗೊಳಿಸಲು ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಸರ್ಕಾರದ ನೀತಿಯಲ್ಲಿ ವಿವರಿಸಿರುವಂತೆ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ವಿಸ್ತೃತವಾದ ಮಾರ್ಗಸೂಚಿಗಳನ್ನು ಸಹ ಹೊರಡಿಸಲಾಗಿರುತ್ತದೆ.

ಮೇಲೆ (3)ರಲ್ಲಿ ಓದಲಾದ ದಿನಾಂಕ 22-07-2024ರ ಸರ್ಕಾರಿ ಆದೇಶದಲ್ಲಿ ವೇತನ ಶ್ರೇಣಿಗಳ ಮತ್ತು ವೇತನಕ್ಕೆ ಹೊಂದಿಕೊಂಡಿರುವ ನಿರ್ದಿಷ್ಟ ಭತ್ಯೆಗಳ ಪರಿಷ್ಕರಣೆ ಮತ್ತು ಪಿಂಚಣಿ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಅದರಂತೆ, ಮೇಲೆ (4)ರಲ್ಲಿ ಓದಲಾದ ದಿನಾಂಕ 23-08-2024ರ ಸರ್ಕಾರಿ ಆದೇಶದಲ್ಲಿ ಪರಿಷ್ಕೃತ ವೇತನ ಶ್ರೇಣಿಗಳನ್ನು ಅನುಷ್ಠಾನಗೊಳಿಸಿ ವಿಸ್ತೃತವಾದ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

ಗ್ರೂಪ್-ಸಿ ಮತ್ತು ಗ್ರೂಪ್-ಡಿ ವೃಂದದ ರಾಜ್ಯ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವ ವೈದ್ಯಕೀಯ ಭತ್ಯೆ ದರಗಳ ಪರಿಷ್ಕರಣೆ ಕುರಿತಂತೆ 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಸರ್ಕಾರವು ಅಂಗೀಕರಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 21 ಎಸ್‌ಆರ್‌ಪಿ 2024 (I)**

**ಬೆಂಗಳೂರು, ದಿನಾಂಕ 27ನೇ ಆಗಸ್ಟ್ 2024**

ಗ್ರೂಪ್-'ಸಿ' ಮತ್ತು ಗ್ರೂಪ್-'ಡಿ' ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವ ವೈದ್ಯಕೀಯ ಭತ್ಯೆಯ ದರಗಳನ್ನು ಮಾಸಿಕ ರೂ.200/- ಗಳಿಂದ ಮಾಸಿಕ ರೂ.500/- ಗಳಿಗೆ **1ನೇ ಆಗಸ್ಟ್ 2024**ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ನಗದುರಹಿತ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ (ಕೆ.ಎ.ಎಸ್.ಎಸ್) ಸೌಲಭ್ಯವು ಅನುಷ್ಠಾನಗೊಳ್ಳುವವರೆಗೆ ಈ ವೈದ್ಯಕೀಯ ಸೌಲಭ್ಯವು ಲಭ್ಯವಿರುತ್ತದೆ.

3. ನಗದುರಹಿತ ವೈದ್ಯಕೀಯ ಸೌಲಭ್ಯ ಯೋಜನೆಯು ಅನುಷ್ಠಾನಗೊಂಡ ನಂತರದಲ್ಲಿ ವೈದ್ಯಕೀಯ ಭತ್ಯೆಯ ಮಂಜೂರಾತಿಯ ಈ ಆದೇಶವು ಜಾರಿಯಲ್ಲಿರುವುದು ಕೊನೆಗೊಳ್ಳುತ್ತದೆ ಮತ್ತು ನಗದುರಹಿತ (ಕೆ.ಎ.ಎಸ್.ಎಸ್) ಯೋಜನೆಯು ಅನುಷ್ಠಾನಗೊಂಡ ಬಳಿಕ ಯಾವುದೇ ಸರ್ಕಾರಿ ನೌಕರನು ಈ ಸೌಲಭ್ಯವನ್ನು ಪಡೆಯಲು ಅರ್ಹನಿರುವುದಿಲ್ಲ.

4. ಈ ಭತ್ಯೆಯನ್ನು ಕ್ರಮಬದ್ಧಗೊಳಿಸಲು ವಿಧಿಸಿರುವ ಇತರೆ ಷರತ್ತುಗಳು ಮುಂದುವರೆದು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Uma K
(ಉಮಾ. ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2)

27/8/2024

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ.ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಎಲ್ಲಾ ಪ್ರಾದೇಶಿಕ ಆಯುಕ್ತರು.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
8. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
9. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.

17. ಎಲ್ಲಾ ಇಲಾಖಾ ಮುಖ್ಯಸ್ಥರು.
18. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
19. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
20. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
21. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
22. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
23. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
24. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
25. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
26. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**